ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 04–01–2019

ಸಂಖ್ಯೆ: 21/21

## ಪತ್ರಿಕಾ ಪ್ರಕಟಣೆ

# ರಾಜ್ಯದಲ್ಲಿ ಫೆಬ್ರವರಿ 3 ರಂದು ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮ

ಬೆಂಗಳೂರು, ಜನವರಿ 4, (ಕರ್ನಾಟಕ ವಾರ್ತೆ)

ರಾಜ್ಯದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಇದೇ ಫೆಬ್ರವರಿ 3ರ ಭಾನುವಾರದಂದು ಪಲ್ಸ್ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಜಾವೇದ್ ಅಕ್ತರ್ ಅವರು ತಿಳಿಸಿದರು.

ಅವರು ಗುರುವಾರ ಬಹುಮಹಡಿ ಕಟ್ಟಡದಲ್ಲಿ ಈ ಕುರಿತು ಹಮ್ಮಿಕೊಳ್ಳಲಾದ ಪೋಲಿಯೋ ಟಾಸ್ಕ ಸಮಿತಿ ಸಭೆಯಲ್ಲಿ ಈ ವಿಷಯ ತಿಳಿಸಿದರು.

ಕಳೆದ 7 ವರ್ಷಗಳಿಂದ ಇಲ್ಲಿಯವರೆಗೂ ಯಾವುದೇ ಪೋಲೀಯೋ ಪ್ರಕರಣ ಭಾರತದಲ್ಲಿ ದಾಖಲಾಗಿಲ್ಲ. ಕೊನೆಯ ಪ್ರಕರಣ 2011 ರಲ್ಲಿ ಪಶ್ಚಿಮ ಬಂಗಾಳದಲ್ಲಿ ದಾಖಲಾಗಿತ್ತು. ನೆರೆಯ ರಾಷ್ಟ್ರಗಳಾದ ಪಾಕಿಸ್ಥಾನ ಮತ್ತು ಅಫ್ಘಾನಿಸ್ತಾನದಲ್ಲಿ ಪೋಲಿಯೋ ಪ್ರಕರಣ ಕಂಡು ಬಂದಿರುವುದರಿಂದ, ಮುಂಜಾಗ್ರತಾ ಕ್ರಮವಾಗಿ ಲಸಿಕೆ ಹಾಕುವುದನ್ನು ಮುಂದುವರಿಸಲಾಗಿದೆ. ಪ್ರತಿ ಶಿಶುವಿಗೆ 5 ವರಸೆ ಒಪಿವಿ ಮತ್ತು 2 ವರಸೆ ಐಪಿವಿ ಲಸಿಕೆಗಳನ್ನು ಸರ್ಕಾರದ ಲಸಿಕಾ ವೇಳಾಪಟ್ಟಿಯಂತೆ ನೀಡಲಾಗುತ್ತದೆ. ಯಾವುದೇ ಮಕ್ಕಳು ಲಸಿಕೆಯಿಂದ ವಂಚಿತವಾಗದಂತೆ ಕ್ರಮ ವಹಿಸಲಾಗಿದೆ. ಅಂದಾಜು 66,77,323 ಮಕ್ಕಳಿಗೆ, 30,237 ಬೂತ್‌ಗಳಲ್ಲಿ, 60474 ತಂಡಗಳಲ್ಲಿ ಲಸಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಇದರಲ್ಲಿ 1,03,464 ಲಸಿಕಾ ಕಾರ್ಯಕರ್ತರು, 6047 ಮೇಲ್ವಿಚಾರಕರು, 1020 ಸಂಚಾರಿ

ತಂಡ ಹಾಗೂ 1737 ಟ್ರಾನ್ಸಿಟ್ ತಂಡಗಳನ್ನು ನೇಮಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ತರಬೇತಿ ಕಾರ್ಯಕ್ರಮವನ್ನು ನೀಡಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಶಿಕ್ಷಣ, ವಾರ್ತಾ, ಕಾರ್ಮಿಕ, ಸಾರಿಗೆ ಹೀಗೆ ಹಲವು ಇಲಾಖೆಗಳ ಸಹಕಾರದೊಂದಿಗೆ ಈ ಲಸಿಕೆ ಕಾರ್ಯಕ್ರಮ ಯಶ್ವಸಿಗೊಳ್ಳಲಿದೆ. ಫೆಬ್ರವರಿ 3 ರಂದು ರಾಷ್ಟ್ರೀಯ ಲಸಿಕಾ ದಿನಾಚರಣೆ ಅಂಗವಾಗಿ ರಾಜ್ಯಾದ್ಯಂತ ಲಸಿಕೆ ಕಾರ್ಯಕ್ರಮ ಹಮ್ಮಿಕೊಂಡಿದ್ದು, ನಂತರ ನಗರ ಪ್ರದೇಶದಲ್ಲಿ 2 ದಿವಸ ಹಾಗೂ ಗ್ರಾಮೀಣ ಪ್ರದೇಶದಲ್ಲಿ 3 ದಿವಸ ಮನೆ ಮನೆಗಳಿಗೆ ತೆರಳಿ ಲಸಿಕೆ ಹಾಕಲಾಗುವುದು ಎಂದರು.

ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ವಾರ್ತಾ ಇಲಾಖೆ ಕಾರ್ಯದರ್ಶಿಗಳಾದ ಪಂಕಜ್ ಕುಮಾರ್ ಪಾಂಡೆ ಹಾಗೂ ವಿವಿಧ ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು.

**ಸಂಖ್ಯೆ: 22/22**

## ಜ.7 ರಿಂದ ಬರ ಪೀಡಿತ ಜಿಲ್ಲೆಗಳಲ್ಲಿ ಕಂದಾಯ ಸಚಿವರ ನೇತೃತ್ವದ ತಂಡದ ಪ್ರವಾಸ

**ಬೆಂಗಳೂರು, ಜನವರಿ 4, (ಕರ್ನಾಟಕ ವಾರ್ತೆ)**

ಕಂದಾಯ ಸಚಿ.0ವ ಆರ್.ವಿ.ದೇಶಪಾಂಡೆ ನೇತೃತ್ವದ ಸಂಪುಟ ಉಪ ಸಮಿತಿ ತಂಡವು ಜನವರಿ 7ರಿಂದ ಬೆಳಗಾವಿ ಕಂದಾಯ ವಿಭಾಗದ ಜಿಲ್ಲೆಗಳಲ್ಲಿ ಮೂರು ದಿನಗಳ ಪ್ರವಾಸ ನಡೆಸಲಿದೆ.

ಜನವರಿ 7ರಂದು ತಮ್ಮ ನೇತೃತ್ವದ ಸಮಿತಿಯಲ್ಲಿ ಸದಸ್ಯರಾಗಿರುವ ಸಚಿವ ಸಹೋದ್ಯೋಗಿಗಳೊಂದಿಗೆ ಹಾವೇರಿ ತಲುಪಲಿರುವ ಅವರು, ಅಂದು ಮಧ್ಯಾಹ್ನ ಗದಗ ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಜನವರಿ 8ರಂದು ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಿಗೆ ಭೇಟಿ ನೀಡಲಿರುವ ದೇಶಪಾಂಡೆ ಮತ್ತು ತಂಡದ ಸದಸ್ಯರು, ಜ.9ರಂದು ಧಾರವಾಡ ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಈ ಎಲ್ಲ ಜಿಲ್ಲೆಗಳಲ್ಲೂ ಬರ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಲಿರುವ ಸಚಿವರ ನೇತೃತ್ವದ ತಂಡವು, ಬರದಿಂದ ಆಗಿರುವ ಹಾನಿ ಮತ್ತು ಬರ ಪರಿಹಾರ ಕೈಕೈಗೊಂಡಿರುವ ಕ್ರಮಗಳನ್ನು ಕುರಿತಂತೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪ್ರಗತಿ ಪರಿಶೀಲನಾ ಸಭೆಗಳನ್ನು ನಡೆಸಲಿದೆ.

ದೇಶಪಾಂಡೆಯವರ ನೇತೃತ್ವದಲ್ಲಿ ಬೆಳಗಾವಿ ಕಂದಾಯ ವಿಭಾಗಕ್ಕೆ ಅನ್ವಯವಾಗುವಂತೆ ರಚಿಸಿರುವ ಸಂಪುಟ ಉಪ ಸಮಿತಿಯಲ್ಲಿ ಸಚಿವರಾದ ಸತೀಶ್ ಜಾರಕಿಹೊಳಿ, ಶಿವಾನಂದ ಪಾಟೀಲ್,

ಜಮೀರ್ ಅಹಮದ್ ಖಾನ್, ಎಂ.ಸಿ. ಮನಗೂಳಿ, ಸಿ.ಎಸ್. ಶಿವಳ್ಳಿ, ಎಂ.ಬಿ. ಪಾಟೀಲ್, ಆರ್.ಬಿ. ತಿಮ್ಮಾಪೂರ ಸದಸ್ಯರಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.